**ದಿಃ 12-12-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರ ಪರ ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿದ್ದು ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯದಿಂದ ಕೂಡಿದ್ದು ಅದನ್ನು ನನ್ನ ಸೂಚನೆಯ ಮೇರೆಗೆ ತಯಾರಿಸಲಾಗಿರುತ್ತದೆ ಮತ್ತು ನಾನು ಅದಕ್ಕೆ ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ನನ್ನ ಮಗನ ಜನನ ಪ್ರಮಾಣ ಪತ್ರ ಕೋರಿ ಎದುರುದಾರರಲ್ಲಿ ಅರ್ಜಿ ಸಲ್ಲಿಸಿದಾಗ, ಎದುರುದಾರರು ನೀಡಿದ ಅಲಭ್ಯ ಪ್ರಮಾಣ ಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ನೋಟರಿಯವರಿಂದ ಧೃಢೀಕರಿಸಿದ ನನ್ನ ಮಗ ಅಯಾನ ಇವರ ಆಧಾರ ಗುರುತಿನ ಚೀಟಿ ಮತ್ತು ನನ್ನ ಆಧಾರ ಗುರುತಿನ ಚೀಟಿಯ ಪ್ರತಿಗಳನ್ನು ಹಾಜರುಪಡಿಸಿದ್ದು ಸದರಿ ದಾಖಲೆಗಳನ್ನು ಮೂಲ ದಾಖಲೆಗಳೊಂದಿಗೆ ಪರೀಶೀಲಿಸಿ ಅವುಗಳನ್ನು ನಿಪಿ-2 ಮತ್ತು ನಿಪಿ-3 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಎದುರುದಾರರು ಏಕತರ್ಪೀಯವಾಗಿರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಮರುವಿಚಾರಣೆಃ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ.ಗಳು,**
**ಕಲಬುರಗಿ**